ಬೆಂಗಳೂರು ಸೆಂಟ್ರಲ್ ಜೈಲ್.

ತಾರೀಖು 8ನೇ ಮೇ ಸ್ ೧೮೯೬ನೇ ಇಸವಿ.

ಸ್ ೧೮೯೬ನೇ ಇಸವಿ ಜುಲೈ 1ರ ಲಾಗಾಯತು ಸ್ ೧೮೯೭ನೇ ಇಸವಿ ಜೂ॥ 30ರವರಿಗೆ, ಆ ಎರಡು ದಿವಸಗಳೂ ಸೇರಿ 12 ತಿಂಗಳ ತನಕ, ಬೆಂಗಳೂರು ಸೆಂಟ್ರಲ್ ಜೈಲಿನ ಖೈದಿಗಳ ಉಪಯೋಗಕ್ಕಾಗಿ ಈ ಕೆಳಗೆ ನಮೂದಿಸುವ ಸರಕುಗಳನ್ನು ಸರಬರಾಯಿ ಮಾಡಲು ಕಂಟ್ರಾಕ್ಟು ತೆಗದುಕೊಳ್ಳುವುದಕ್ಕಾಗಿ, ಕವರಿನಲ್ಲಿ ಹಾಕಿ ಮೊಹರು ಮಾಡಿದ ದರಖಾಸ್ತುಗಳನ್ನು ಸ್ ೧೮೯೬ನೇ ಇಸವಿ ಜೂ॥ 8ನೇ ಸೋಮವಾರ ಹಗಲು 1 ಘಂಟೆಯವರಿಗೆ, ಬೆಂಗಳೂರ ಸೆಂಟ್ರಲ್ ಜೈಲ್ ಸೂಪರಿಂಟಿಂಡೆಂಟರು ತೆಗದುಕೊಳ್ಳುವರೆಂದು ಇದರಿಂದ ಫಾಯಿಷ್ ಮಾಡಿದೆ.

2. ಮೇಲೆ ಕಂಡ ತಾರೀಖಾದ ತರುವಾಯ ದರಖಾಸ್ತುಗಳನ್ನು ಹಿಡಿಯುವದಿಲ್ಲ.

3. ದರಖಾಸ್ತು ಕವರಿನ ಮೇಲ್ಭಾಗದಲ್ಲಿ ಬರೆದಿರಬೇಕಾದ ಮೇಲ್ವಿಳಾಸವೇನೆಂದರೆ,

"I. ಕುರಿ ಮಾಂಸದ ಸರಬರಾಯಿ ದರಖಾಸ್ತು"

"II. ಸವದೇ ಸರಬರಾಯಿ ದರಖಾಸ್ತು."

4. ಕುರಿ ಮಾಂಸದ ಸರಬರಾಯಿಗೆ 75 ರೂಪಾಯಿ, ಸವದೇ ಸರಬರಾಯಿಗೆ 50 ರೂಪಾಯಿ, ಈ ಮೇರೆ ನಗದಾಗಿಯಾಗಲಿ ಕರೆನ್ಸೀ ನೋಟಿನ ಮೂಲಕವಾಗಿಯಾಗಲಿ ತೇವಣಾತಿಯನ್ನು ದರಖಾಸ್ತಿನ ಸಂಗಡ ಹಾಜರ್ಮಾಡಿದ ಹೊರತು, ದರಖಾಸ್ತುಗಳನ್ನು ಹಿಡಿಯುವದಿಲ್ಲ.

5. ಬೆಂಗಳೂರ ಸೆಂಟ್ರಲ್ ಜೈಲ್ ಸೂಪರಿಂಟೆಂಡೆಂಟರವರು ಮೇಲೆ ಸಮೂದಾದ ತಾರೀಖಿನಲ್ಲಿ ಆ ಕಾಲದೊಳು ಹಾಜರಿರುವುದಕ್ಕೆ ಇಷ್ಟವ್ಯಳ್ಳಂಥಾ ದರಖಾಸ್ತುದಾರರ ರೂಬರೂ ಸದರೀ ದರಖಾಸ್ತುಗಳನ್ನು ತಮ್ಮ ಆಫಿಸಿನಲ್ಲಿ ಬಿಡಿಯುವರು.

6. ಈ ಕೆಳಗೆ ನಮೂದಿಸುವ ಪದಾರ್ಥಗಳನ್ನು ಬಂದು ರೂಪಾಯಿಗೆ ಇಷ್ಟು ಪೌಂಡು ತೂಕದ ಮೇರೆ ಸರಬರಾಯಿ ಮಾಡಲಾಬೇಕೆಂದು ಎಲ್ಲಾ ದರಖಾಸ್ತುಗಳಲ್ಲಿಯೂ ದರವು ನಮೂದಾಗಿರತಕ್ಕದ್ದು. ಮತ್ತು ಸರಬರಾಯಿ ಮಾಡತಕ್ಕ ಪದಾರ್ಥಗಳೆಲ್ಲಾ ಬಿಳ್ಳೇದಾಗಿಯೂ ಸೂಪರಿಂಟೆಂಡೆಂಟರವರ ಮಂಜೂರಾತಿಗೆ ಬಳಪಟ್ಟಿರತಕ್ಕದ್ದು.

ಸಂವತ್ಸರದ ಅಂದಾಜಾ ಖರ್ಚು.

I. ಮೂಳೆ ಇಲ್ಲದ ಮಾಂಸ—20,000 ಪೌಂಡು.

II. ಬಣಗಿದ ಸವದೆ—ಖೈದಿಗಳ ಕೈಲಿ ಕಡಿಸತಕ್ಕದ್ದು, ತುಂಡುಗಳ ಪ್ರಮಾಣ ಬಂದು ಮಳಪುದ್ಪವೂ 1½ ಲಾಗಾಯತು 3 ಯಿಂಚು ಘಾತ್ರವಾಗಿಯೂ ಇರತಕ್ಕದ್ದು 400,000 ಪೌಂಡುಗಳು.

ಪದಾರ್ಥಗಳು ಮೇಲೆ ಕಂಡ ಪರಿಪೂರ್ಣದ ಮೇಲೆ ಇಷ್ಟಿಷ್ಟೇ ಆಗಬೇಕೆಂದು ಖಾತರಿಯೂವುದೂ ದೊರೆಯುವದಿಲ್ಲ.

7. ಸೂಪರಿಂಟೆಂಡೆಂಟರು ಯಾವ ದರಖಾಸ್ತನ್ನೇ ಆಗಲಿ ಯಾವ ಕಾರಣವನ್ನೂ ಕೊಡದೆ ತಿರಸ್ಕರಿಸುವ ಹಕ್ಕನ್ನು ವುಳಸಿಕೊಂಡಿಧಾರೆ.

8. ಯಾರ ದರಖಾಸ್ತನ್ನು ಮಂಜೂರ್ಮಾಡಿಕೊಳ್ಳತ್ತಾರೆಯೋ ಅಂಥಾ ದರಖಾಸ್ತುದಾರರು ಹಾಜರ್ಮಾಡಿದ ತೇವಣೀ ಮೊಬಲಗು ಇಟ್ಟುಕೊಳ್ಳಲ್ಪಡುವುದು; ಮತ್ತು ಅವರ ದರಖಾಸ್ತು ಮಂಜೂರಾಗಿಧೆ ಯಂದು ಅವರಿಗೆ ತಿಳಿಯಪಡಿಸಿದ ಬಂದು ವಾರದೊಳಗಾಗಿ ಅವರು ಕಂಟ್ರಾಕ್ಟು ಕರಾರನ್ನು ಬರದು ಕೊಡದೇ ಹೋದರೂ ಸರಿಯೆ, ಅಥವಾ ಕುರಿ ಸ್ಥಾಂಸಕ್ಕೆ 150 ರೂಪಾಯಿ, ಸವದೆಗೆ 100 ರೂಪಾಯಿ, ಈ ಮೇರೆ ನಗದಾಗಿಯಾಗಲಿ ಸರ್ತ್ಕಾರೀ ಬಾಂಡುಗಳ ಮೂಲಕವಾಗಿಯಾಗಲಿ ಸೆಕ್ಯೂರಿಟಿಯನ್ನು ಕೊಡದೆ ಇದ್ದರೂ ಸರಿಯೆ ಮೇಲೆ ಕಂಡ ತೇವಣೀ ಮೊಬಲಗು ಸಿವಾಯಿ ಜಮೆಯಾಗಿ ತೆಗದುಕೊಳ್ಳಲಾದೀತು.

9. ಕಂಟ್ರಾಕ್ಟರು ಯಾ ಇಜಾರೆದಾರರಿಗೆ ನಗದು ಹಣ ಮುಂಗಡವಾಗಿ ಪಾವತಿಯಾಗಲಾರದು. ಸಾಮಾನುಗಳನ್ನು ಸರಬರಾಯಿ ಮಾಡಿದ್ದಕ್ಕಾಗಿ ಹಣವನ್ನು ಬೆಂಗಳೂರ ಸೆಂಟ್ರಲ್ ಜೈಲ್ ಸೂಪರಿಂಟೆಂಡೆಂಟರವರು ಪ್ರತಿ ತಿಂಗಳ ಗುರ್ತೇ ತಾರೀಖಾದ ತರುವಾಯ ಸಾಧ್ಯವಾದ ಮಟ್ಟಿಗೂ ಜಾಗ್ರತೆಯಲ್ಲಿ ಪಾವತಿ ಮಾಡುವರು.

10. ಸ್ಕ್ಯೋರ್ ರೂಂ ಎಂಬ ಬಂದು ಉಗ್ರಾಣವನ್ನು ಸವದೆ ಇಜಾರೆದಾರರ ವಶಕ್ಕೆ ಕೊಡಲಾದೀತು; ಆತನು ಅದರಲ್ಲಿ ಸವುದೆ ಇಟ್ಟುಕೊಳ್ಳತಕ್ಕದ್ದು, ಮತ್ತು ಅದರಲ್ಲಿ ಯಾವಾಗ್ಯೂ ಬಂದು ತಿಂಗಳಿಗೆ ಕಡಮೆ ಇಲ್ಲದಂತೆ ಸರಬರಾಯನ್ನು ಇಟ್ಟಿರಬೇಕು. ಂಸನ್ನು ಪ್ರತಿ ದಿನವೂ ಬೆಳಿಗ್ಯೆ 7 ಘಂಟೆ ವಳಗಾಗಿ ಜೈಲ್‌ನಲ್ಲಿ ಸಿದ್ಧಪಡಿಸತಕ್ಕದ್ದು.

ಂಟ್ರಾಕ್ಟನ್ನು ಪಿಕ್ಕಿ ಇಜಾರೆಯಾಗಿ ಕೊಡಕೂಡದು.

ಷರತ್ತಿಗೆ ಏನಾದರೂ ವಿರುದ್ಧವಾಗಿ ನಡೆದರೂ ಸರಿಯೆ, ಗುಣದಲ್ಲಿ ಕಡಮೆಯಾಗಿರತಕ್ಕ ಪದಾರ್ಥಗಳನ್ನು ಬೆಂಗಳೂರ ಸೆಂಟ್ರಲ್ ಜೈಲ್ ಸೂಪರಿಂಟೆಂಡೆಂಟರವರು ಮುನಾಸಬು ಕಿರಿತು 50 ರೂಪಾಯಿಗೆ ಮಾಡಬಹುದು; ಪದೇಪದೇ ಕರಾರಿಗೆ ತಪ್ಪು ಹೋದರೆ ಕಂಟ್ರಾಕ್ಟನ್ನು ರದ್ದು ಮಾಡಿ ಸೆಕ್ಯೂರಿಟಿಯಾಗಿ ತೆಗದುಕೊಳ್ಳಬಹುದು.

ೀಧವಾಗಿ ನಡೆದ ಸಂಗತಿಗಳೆಲ್ಲೆಲ್ಲಾ ಸದರೀ ಸೆಂಟ್ರಲ್ ಜೈಲ್ ಸೂಪರಿಂಟೆಂಡೆಂಟರ ಫೈಸಲೇ

14. ಮತ್ತೆ ಯಾವ ಸಂಗತಿ ಬೇಕಾಗಿದ್ದರೂ ಸೂಪರ್‌ಟೆಂಡೆಂಟರ ಆಫಿಸಿನಲ್ಲಿ ವಿಚಾರಿಸಿ ತಿಳಿದುಕೊಳ್ಳಬಹುದು.

15. ಈ ಕಂಟ್ರಾಕ್ಟುಗಳು ಮೈಸೂರ ಜೈಲ್ ಇನ್‌ಸ್ಪೆಕ್ಟರ್ ಜನರಲ್‌ರವರ ಪುಂಜೂರಾತಿಗೆ ಒಳಪಟ್ಟು ಇರುವವು.

16. ಕಂಟ್ರಾಕ್ಟುದಾರರು ಇಜಾರೆಯನ್ನು ತೆಗೆದುಕೊಂಡ ತರುವಾಯ ತಮ್ಮ ಕರಾರಿನಂತೆ ನಡೆಯಲು ಇಷ್ಟ ಪಡದಿದ್ದರೆ, ಒಂದು ತಿಂಗಳಿಗೆ ಮುಂಚಿತವಾಗಿಯೇ ನೋಟಿಸ್ ಕೊಡಬೇಕು, ಮತ್ತು ಅವರ ಸೆಕ್ಯೂರಿಟಿ ಹಣವನ್ನು ಸರಕಾರಕ್ಕೆ ಬಿಟ್ಟುಬಿಡಬೇಕು.

17. ಇಜಾರೆದಾರರು ತಪ್ಪಿ ಹೋಗುವುದರಿಂದ ಸರ್ಕಾರಕ್ಕೆ ಆಗುವ ನಷ್ಟವನ್ನೂ ಅಥವಾ ಕಂಟ್ರಾಕ್ಟಿನಲ್ಲಿ ನಮೂದಾಗುವ ಪದಾರ್ಥಗಳನ್ನೂ ಸರ್ಕಾರದವರು ಕಂಟ್ರಾಕ್ಟು ದರಕ್ಕಿಂತಲೂ ಹೆಚ್ಚುದರದ ಮೇರೆ ಬಜಾರದಲ್ಲಿ ಕೊಂಡುಕೊಂಡರೆ ಆ ನಷ್ಟವನ್ನೂ ಇಜಾರೆದಾರರು ಸರ್ಕಾರಕ್ಕೆ ಭರ್ತೀಮಾಡಿ ಕೊಡಬೇಕು. ವಿಚಾರ—ಮೇಲೆ ನಮೂದಾದ ಕಂಟ್ರಾಕ್ಟುಗಳ ವಿಷಯದಲ್ಲಿ ಯಾವ ವಿಧವಾದ ರಿಸಾಯಿತಿಯೂ ದೊರೆಯಲಾರದು.

ಡಿ. ಎ. ಜೋಕ್ಸ್,
ಬೆಂಗಳೂರ್ ಸೆಂಟ್ರಲ್ ಜೈಲ್ ಸೂಪರ್‌ಟೆಂಡೆಂಟ್.

ಕೋಲಾರ್ ಡಿಸ್ಟ್ರಿಕ್ಟ್.

ತಾರೀಖು 13ನೇ ಏಪ್ರೆಲ್ 1896.

ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ,—

I. ಕೋಲಾರ ಡಿಸ್ಟ್ರಿಕ್ಟು ಚಿಕ್ಕಬಳ್ಳಾಪುರ ಸಬ್ ಡಿವಿಜನಿಗೆ ಕೇರದ ಗೋರೀಬಿದನೂರು ತಾಲ್ಲೂಕಿನಲ್ಲಿ ಅಫಿಫಿಯಲ್ ಸಾಲ್ ಅಂದರೆ 1896ನೇ ಇಸವಿ ಜುಲೈ ಲಾಗಾಯತು 1897ನೇ ಇಸವಿ ಜೂನ್ ಆಖೈರವರಿಗೆ ಕುರಂಗದ ಕಲ್ಲುಗಳನ್ನು ಜಮಾಯಿಸಿಕೊಳ್ಳತಕ್ಕ ಹಕ್ಕುದಾರಿಯನ್ನು ಸದರಿ ತಾಲ್ಲೂಕು ಕಚೇರಿಯಲ್ಲಿ 1896ನೇ ಇಸವಿ ಮೇ ಮಾಹೆ 28ನೇ ತಾರೀಖಿನಲ್ಲಿ ಬಹಿರಂಗವಾಗಿ ಹರಾಜು ಮಾಡಲ್ಪಡುವದು.

II. ಸದರಿ ಹರಾಜು ಸದರಿ ತಾರೀಖು ಬೆಳಿ 11 ಘಂಟೆಗೆ ಅಮಲ್‌ದಾರ್ ಯಾ ಶಿರಸ್ತೇದಾರ್‌ರಿಂದಲಾಗಲಿ ಹರಾಜು ಪ್ರಾರಂಭ ಮಾಡಲ್ಪಡುವದು.

III. ಸದರಿ ಹರಾಜು ಚಿಕ್ಕಬಳ್ಳಾಪುರ ಸಬ್ ಡಿವಿಜ್ ಆಫಿಸರವರ ಮಂಜೂರಾತಿಗೆ ವಳಪಟ್ಟದ್ದಾಗಿರುತ್ತೆ.

IV. ಹರಾಜಿನಲ್ಲಿ ಸವಾಲ್ ಮಾಡತಕ್ಕಂಥಾವರು ತಮ್ಮ ಸ್ವಂತಕ್ಕೋಸ್ಕರ ಸವಾಲ್ ಮಾಡುತ್ತಾರೆಯೇ ಅಥವಾ ಮತ್ತೊಬ್ಬರಿಗೋಸ್ಕರ ಸವಾಲ್ ಮಾಡುತ್ತಾರೆಯೇ ನಮೂದಿಸಬೇಕು ಮತ್ತೊಬ್ಬರಿಗೋಸ್ಕರವಾದರೆ ಅಂಥಾವರ ಬರಹಮೂಲಕವಾದ ಅಧಿಕಾರ ಪತ್ರಿಕೆಯನ್ನು ಅಂದರೆ ಅವರ ದಸ್ಕತ್ತು ಇರತಕ್ಕ ಕಾಗದವನ್ನು ಹಾಜರ್‌ಮಾಡಬೇಕು ಇಲ್ಲವಾದರೆ ಅಂಥಾವರ ಸವಾಲನ್ನು ಅಂಗೀಕರಿಸುವದಿಲ್ಲ.

ಕ್ರಯದಾರನು ಹರಾಜು ಕಾಲದಲ್ಲಿ ಕ್ರಯದ ಮೊಬಲಗು ಪೈಕಿ ಕೇಕಡಾ 25 ರೂಪಾಯಿನಂತೆ ಆಗುವ ಮೊಬಲಗು ಡಿಪಾಜಿಟ್ ಇಡಬೇಕು ಹರಾಜು ಮಂಜೂರ್‌ಮಾಡಲ್ಪಟ್ಟ ಸಂಗತಿ ಕ್ರಯದಾರನಿಗೆ ತಿಳಿಸಲ್ಪಟ್ಟ ತಾರೀಖು ಲಾಗಾಯತು 7 ದಿವಸದಲ್ಲಿ ಕ್ರಯದ ಮೊಬಲಗ್ ಮೇಲೆ ರೂಪಾಯಿ 1ಕ್ಕೆ 1 ಆಣೆ ಮೇರೆಗೆ ಆಗುವ ಲೋಕಲ್‌ಸೆಸ್ ದೇಖೀಲ್ ಬಾಕಿ ಮೊಬಲಗನ್ನು ಪಾವತಿ ಮಾಡಬೇಕು ಹಾಗೆ ಡಿಪಾಜಿಟ್ ಮೊಬಲಗೇ ಆಗಲಿ ಪೂರಾ ಮೊಬಲಗೇ ಆಗಲಿ ಕೊಡದೆ ತಪ್ಪಿದರೆ ಡಿಪಾಜಿಟ್ ಮೊಬಲಗು ಕೊಟ್ಟು ಬಾಕಿ ಮೊಬಲಗು ಕೊಡದೆ ತಪ್ಪಿದರೆ ಡಿಪಾಜಿಟ್ ಮೊಬಲಗು ದಂಡವಾಗಿ ಸರಕಾರಕ್ಕೆ ಸೇರಿಸಿಕೊಂಡು ಹರಾಜು ಹಕ್ಕುದಾರಿಯನ್ನು ಅವ್ವಲ್ ಕ್ರಯದಾರನ ಖರ್ಚಿಗೂ ಮತ್ತು ಲುಕ್ಸಾನಿಗೂ ವಳಪಡಿಸಿ ಪುನಹ ಹರಾಜು ಮಾಡಲ್ಪಡುವದು.

ಇಜಾರೆದಾರನು ಹಿಡುವಳಿ ಜಮೀನಿನಲ್ಲಿರತಕ್ಕ ಕಲ್ಲುಗಳನ್ನ ಅವನ ಅನುಮತಿ ವಿನಾಯಿ ತೆಗದುಕೊಳ್ಳಿಕೂಡದು ಈ ಜಮೀನಿನ ಹಿಡುವಳಿದಾರನಾದರೂ ಸ್ವಂತ ಉಪಯೋಗಕ್ಕೋಸ್ಕರವಾಗಿ ಜಮಾಯಿಸತಕ್ಕದ್ದಲ್ಲ ಆದರೆ ಜಮಾಯಿಸತಕ್ಕ ಕಲ್ಲುಗಳನ್ನ ಇಜಾರೇದಾರನಿಗೆ ಕೊಡಬೇಕೇ ಹೊರ್ತು ಮತ್ತೊಬ್ಬರಿಗೆ ಕೊಡತಕ್ಕದ್ದಲ್ಲ.

ಇಜಾರೆದಾರನು ಹುಲ್ಲುಬನ್ನಿ ಇಜಾರೆದಾರನ ಜರೂರ್ ಹಕ್ಕಿನಲ್ಲಿ ಪ್ರವೇಶಿಸಕೂಡದು ಇಜಾರೆದಾರನಿಗೆ ಇಜಾರೆ ಮಾಡಿಕೊಂಡು ಇರುವ ಪ್ರದೇಶದಲ್ಲಿ ಇರತಕ್ಕ ಕಲ್ಲುಗಳನ್ನ ಜಮೀನಾಯಿಸಿಕೊಳ್ಳತಕ್ಕ ಹಕ್ಕು ಮಾತ್ರ ಇರತಕ್ಕದ್ದಾಗಿರುತ್ತೆ ಪರಂತು ಬಂಜರು ಜಮೀನುಗಳನ್ನ ಸಾಗುವಳಿ ಬಗ್ಗೆ ಕೊಡುವದಕ್ಕೋಸ್ಕರ ಬರುವ ದರಖಾಸ್ತುಗಳಿಗೆ ಇಜಾರೆದಾರನ ಅಭ್ಯಂತರವೇನೂ ಇಲ್ಲ.

ಇಜಾರೆದಾರನು ಕಲ್ಲುಗಳಿಗೋಸ್ಕರ ಜಮೀನುಗಳನ್ನ ಅಗಿಯಕೂಡದು ಬಂದು ವ್ಯಾಳ ಆಗದಲ್ಲಿ ಸಾಗುವಳಿ ಲಾಯಖಾಗುವಂತೆ ಗುಣಿಗಳನ್ನ ಮುಚ್ಚಿಸಬೇಕು ಇಜಾರೆದಾರನು ಯಾವ ಪ್ರದೇಶದಲ್ಲಿ ಜಮಾಯಿಸುತ್ತಾನೆಯೋ ಗ್ರಾಮ ಕಲ್ಲಿನ ಪೊತ್ತ ಯಾವ ಸ್ಥಳಕ್ಕೆ ರವಾನೆ ಮಾಡುತ್ತಾನೋ ಈ ವಗೈರೆ ತಪ್ಪೀಲ್ ಕಂಡು ಅಮಲ್‌ದಾರ್‌ರಿಂದ ಮಾಫಿ ಲೈಸೆನ್ಸು ಪಡದು ರವಾನಿಸಬೇಕು ಲೈಸೆನ್ಸು ಇಲ್ಲದೆ ರವಾನಿಸಕೂಡದು ಈ ಮೇರಿಗೆ ತಿಳಿಯಪಡಿಸಿ ಇಧೆ.

ಬಿ. ಜಿ. ಕೃಷ್ಣಯ್ಯಂಗಾರ್,
ಆ|| ಡೆಪ್ಯುಟಿ ಕಮ್ಮಿಷನರ್.

ಮೈಸೂರ್ ಡಿಸ್ಟ್ರಿಕ್ಟ್.

ಪ್ರಕಟನೆ.

ತಾರೀಖು 6ನೇ ಮೇ 1896.

ಮೈಸೂರು ಡಿಸ್ಟ್ರಿಕ್ಟಿನಲ್ಲಿ ಇದರಡಿಯಲ್ಲಿ ಕಂಡ ಹೋಬಳಿಗಳಲ್ಲಿ ಸಂದಲ್ ಮರಗಳನ್ನು ಬೇರು ಸಮೇತವಾಗಿ ಕೀಳಿಸಿ ಪೊಟ್ಟಕೆತ್ತನೆ ಮಾಡಿ ಆಯಾ ಹೋಬಳಿಗಳಿಗೆ ಬಾಜೂದಲ್ಲಿ ತೋರಿಸಿರುವ ಕೋರಿಗಳಿಗೆ 1896ನೇ ಇಸವಿ ಅಕ್ಟೋಬರ್ ಆಖೈರ್ ವಳ